# ಬಿಜೆಪಿ ಶಾಸಕರಿಗೆ ವಿಪ್ ಜಾರಿ

17/2/20

**ಬೆಂಗಳೂರು:** ವಿಧಾನ ಪರಿಷತ್‌ನ ಒಂದು ಸ್ಥಾನಕ್ಕೆ ಉಪಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕರಿಗೆ ವಿಪ್ ಜಾರಿ ಮಾಡಲಾಗಿದೆ. ಸೋಮವಾರ ಬೆಳಗ್ಗೆ ಮತದಾನ ಮಾಡಿ ಬಳಿಕ ವಿಧಾನಮಂಡಲ ಜಂಟಿ ಅಧಿವೇಶನದಲ್ಲಿ ಪಾಲ್ಗೊಳ್ಳಬೇಕು ಎಂದು ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಶಾಸಕರಿಗೆ ಸೂಚನೆ ನೀಡಲಾಗಿದೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ರಾತ್ರಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಮುಖ್ಯಮಂತ್ರಿ ಯಡಿಯೂರಪ್ಪ ರಾಜ್ಯಾಧ್ಯಕ್ಷರಾದ ಸಂಸದ ನಳಿನ್ ಕುಮಾರ್ ಕಟೀಲ್ ಅವರು ಶಾಸಕರಿಗೆ ಕೆಲ ನಿರ್ದಿಷ್ಟ ಸೂಚನೆ ನೀಡಿದರು. ಪರಿಷತ್‌ನ ಒಂದು ಸ್ಥಾನಕ್ಕೆ ಸ್ಪರ್ಧಿಸಿರುವ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿಯವರನ್ನು ಗೆಲ್ಲಿಸಬೇಕಿದ್ದು ಎಲ್ಲರೂ ಬೆಳಗ್ಗೆಯೇ ಮತದಾನ ಮಾಡಿ ನಂತರ ಜಂಟಿ ಅಧಿವೇಶನಕ್ಕೆ ಹಾಜರಾಗಬೇಕು ಎಂದು ಸೂಚನೆ ನೀಡಿದ್ದಾರೆ.

ಕಲಾಪ ಸಂದರ್ಭದಲ್ಲಿ ಸದಸ್ಯರೆಲ್ಲಾ ಕಡ್ಡಾಯವಾಗಿ ಹಾಜರಿರಬೇಕು. ಚರ್ಚೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ನೂತನ ಸಚಿವರು ತಮ್ಮ ಇಲಾಖೆಗೆ ಸಂಬಂಧಪಟ್ಟ ಅಂಕಿಸಂಖ್ಯೆಗಳನ್ನು ಹೊಂದಿಸಿಕೊಂಡು ಅಧಿವೇಶನಕ್ಕೆ ಸಜ್ಜಾಗಿ ಬರಬೇಕು. ಪ್ರತಿಪಕ್ಷಗಳ ಆರೋಪಕ್ಕೆ ಹಿಂಜರಿಯದೆ ತಕ್ಕ ಪ್ರತ್ಯುತ್ತರ ನೀಡಬೇಕು. ಶಾಸಕರು ಅದಕ್ಕೆ ದನಿಗೂಡಿಸಬೇಕು. ರಾಜ್ಯಪಾಲರ ಭಾಷಣಕ್ಕೆ ಅಡ್ಡಿಪಡಿಸಲು, ಪ್ರತಿರೋಧ ತೋರಲು ಪ್ರತಿಪಕ್ಷಗಳು ಮುಂದಾದರೆ ಬಿಜೆಪಿಯಿಂದಲೂ ಸೂಕ್ತ ಪ್ರತಿರೋಧ ತೋರಬೇಕು ಎಂದು ಹಿರಿಯ ನಾಯಕರು ಸೂಚಿಸಿದ್ದಾರೆ. ಕೆಲ ಶಾಸಕರು, ಸಚಿವರು ಭೇಟಿಗೆ ಸಿಗುತ್ತಿಲ್ಲ, ಸ್ಪಂದಿಸುತ್ತಿಲ್ಲ ಎಂದು ಅಳಲು ತೋಡಿಕೊಂಡಾಗ, ಹಿರಿಯ ನಾಯಕರು ಶಾಸಕರಿಗೆ ಸ್ಪಂದಿಸುವಂತೆ ಸೂಚನೆ ನೀಡಿದರು. ಸಭೆಯಲ್ಲಿ 98 ಶಾಸಕರು ಪಾಲ್ಗೊಂಡಿದ್ದರು.

## ಬಜೆಟ್‌ಗೆ ಸಲಹೆ ಕೊಡಿ

**ಮಾ.** 5ರಂದು ಬಜೆಟ್ ಮಂಡನೆಯಾಗಲಿದ್ದು, ಸಲಹೆ ನೀಡುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಶಾಸಕರಲ್ಲಿ ಮನವಿ ಮಾಡಿದ್ದಾರೆ. ಜನಪರ ಬಜೆಟ್‌ಗೆ ಸಿದ್ಧತೆ ನಡೆದಿದ್ದು, ಸದಸ್ಯರು ಸೂಕ್ತ ಸಲಹೆ ನೀಡುವಂತೆ ಯಡಿಯೂರಪ್ಪ ಹೇಳಿದ್ದಾರೆ.